**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಎಸ್.ಎಲ್ ಭೋಜೇಗೌಡ ಹಾಗ ಶ್ರೀ ಮಧು ಜಿ. ಮಾದೇಗೌಡ ಇವರುಗಳು ನಿಯಮ 72ರಡಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರ.**

**ವಿಷಯ**

ದೈಹಿಕ ಶಿಕ್ಷಣ ಪರಿವೀಕ್ಷಕರ ಗ್ರೂಪ್ -ಬಿ ಹುದ್ದೆಯಿಂದ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಹುದ್ದೆಗ ಮುಂಬಡ್ತಿಯ ಸಲುವಾಗಿ ಒಟ್ಟು 36 ಹುದ್ದೆಗಳನ್ನು ಸೃಜಿಸಲಾಗಿರುತ್ತದೆ. ರಾಜ್ಯದಲ್ಲಿ ಪ್ರಸ್ತುತ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿಗಳ ಒಟ್ಟು 36 ಹುದ್ದೆಗಳ ಪೈಕಿ 27 ಹುದ್ದೆಗಳು ಖಾಲಿ ಇರುತ್ತದೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಸೃಜಿಸಲಾಗಿದೆ. ಆದರೆ ಈ ಹುದ್ದೆಗಳನ್ನು ಬಡ್ತಿ ಮೂಲಕ ತುಂಬದೆ ಇರುವುದರಿಂದ ಸುಮಾರು 12 ವರ್ಷಗಳಿಂದ ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳದೆ ಇರುವುದರಿಂದ ಕ್ರೀಡಾ ಕೂಟಗಳನ್ನು ನಡೆಸಲು ಹಾಗೂ ದೈಹಿಕ ಶಿಕ್ಷಣಕ್ಕೆ ತುಂಬಾ ತೊಂದರೆಯಾಗಿತ್ತಿರುವ ಗಂಭೀರ ಸಮಸ್ಯೆಯ ಕುರಿತು.

**ಉತ್ತರ**

ಗ್ರೂಪ್-"ಎ" ಕಿರಿಯ ಶ್ರೇಣಿಯ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದದ ಒಟ್ಟು 38 ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ ಪ್ರಸ್ತುತ ಸದರಿ ವೃಂದದ 34 ಹುದ್ದೆಗಳು ಖಾಲಿ ಇರುತ್ತವೆ. ಸದರಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಲು ಸರ್ಕಾರದವತಿಯಿಂದ ದಿನಾಂಕ:07/05/2016ರಲ್ಲಿ ಹೊರಡಿಸಿರುವ ಅಧಿಸೂಚನೆಯನ್ವಯ ಈ ಕೆಳಕಂಡಂತೆ ವೃಂದ ಮತ್ತು ನೇಮಕಾತಿ ವಿಧಾನವನ್ನು ನಿಗಧಿಪಡಿಸ ಲಾಗಿರುತ್ತದೆ.

> **"Must have put in a service of not less than 5 years in the cadre of Physical Education Inspectors in the Block Education Office:**
> **"Provided that if an official who has put in service of not less than 5 years is not available, then an official who have put in not less than 3 year of service may be considered for promotion".**

ಮೇಲ್ಕಂಡ ವೃಂದ ಮತ್ತು ನೇಮಕಾತಿ ನಿಯಮದಂತೆ ಪ್ರಸ್ತುತ ದೈಹಿಕ ಶಿಕ್ಷಣ ಪರಿವೀಕ್ಷಕರು ಹಾಗೂ ತತ್ಸಮಾನ ವೃಂದದ ಅಧಿಕಾರಿಗಳ ಜೇಷ್ಠತಾ ಪಟ್ಟಿಯಾನುಸಾರ ಮೂರು ವರ್ಷ ಪೂರೈಸಿರುವ ಅರ್ಹ ಅಧಿಕಾರಿಗಳು ಲಭ್ಯವಿಲ್ಲದ ಕಾರಣ ಮುಂಬಡ್ತಿ ನೀಡಲು ಸಾಧ್ಯವಾಗಿರುವುದಿಲ್ಲ.

ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾಗಿರುವ 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ಪೈಕಿ ನೇರ ನೇಮಕಾತಿ ಕೋಟಾದ 10 ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕಾತಿ ಮಾಡಿಕೊಳ್ಳಲು ಪ್ರಸ್ತಾವನೆ ಕಳುಹಿಸಲಾಗಿರುತ್ತದೆ. ಬಡ್ತಿ ಕೋಟಾದ 10 ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಪ್ರೌಢ ಶಾಲಾ ದೈಹಿಕ ಶಿಕ್ಷಕರ ವ್ಯಕ್ತಿ ಪೂರ್ವೋತ್ತರ ವಿವರಗಳನ್ನು ಪಡೆದು ಬಡ್ತಿ ನೀಡಲು ಕ್ರಮವಹಿಸಲಾಗುತ್ತಿದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಕ್ರೀಡಾ ಕೂಟವನ್ನು ಮತ್ತು ದೈಹಿಕ ಶಿಕ್ಷಣ ವಿಭಾಗದ ಕಾರ್ಯವನ್ನು ಯಾವುದೇ ಅಡೆತಡೆಗಳಿಲ್ಲದೆ ಸೂಸೂತ್ರವಾಗಿ ನಡೆಸಲು ಪ್ರಸ್ತುತ ಖಾಲಿ ಇರುವ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಹುದ್ದೆಗಳಿಗೆ ತಾಲ್ಲೂಕ ದೈಹಿಕ ಶಿಕ್ಷಣ ಪರಿವೀಕ್ಷಕರನ್ನು ಪ್ರಭಾರದಲ್ಲಿರಿಸಲು ಕ್ರಮವಹಿಸಲಾಗಿದೆ. ಇದೂವರೆಗೂ ಕ್ರೀಡಾಕೂಟ ನಡೆಸಲು ಅಡಚಣೆಯಾಗಿರುವ ಕುರಿತು ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ.

**ಸಂಖ್ಯೆ**: ಇಪಿ 141 ಡಿಎಲ್‌ಆರ್ 2023

(ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.